ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಮೈಸೂರು ಡೀಸಿ ವಿರುದ್ಧ ಸ್ಪೀಕರ್‌ಗೆ ದೂರು: ಸಾರಾ

ಚಾಮರಾಜನಗರ: ಕಾಗದ ಪತ್ರ ಸಮಿತಿಯು ಸಂವಿಧಾನ ಬದ್ಧವಾಗಿ ರಚನೆಯಾಗಿದೆ. ಸಮಿತಿ ಭೇಟಿ ವೇಳೆ ಅದರದ್ದೇ ಆದ ಶಿಷ್ಟಾಚಾರ ಇರುತ್ತದೆ. ಹಾಗಾಗಿ ಮೈಸೂರಿನಲ್ಲಿ ನಡೆದ ಘಟನೆ ಬಗ್ಗೆ ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿ ವಿರುದ್ಧ ನಾನು ಮತ್ತು ನಮ್ಮ ಸಮಿತಿ ಸದಸ್ಯರು ಸ್ಪೀಕರ್‌ಗೆ ದೂರು ಕೊಡುತ್ತೇವೆ ಮಾಜಿ ಸಚಿವ, ಶಾಸಕ. ಸಾ.ರಾ. ಮಹೇಶ್ ತಿಳಿಸಿದರು. ಸಮಿತಿಯ ಸಭೆ ನಡೆಸುವುದಕ್ಕೂ ಮೊದಲು ಸುದ್ದಿಗಾರರೊಂದಿಗೆ ಮಾತನಾಡಿ, ಸಮಿತಿ ಬಂದ ಮೇಲೆ ಶಿಷ್ಟಾಚಾರ ಪಾಲನೆ ಮಾಡಬೇಕು. ಶಿಷ್ಟಾಚಾರ ಉಲ್ಲಂಘಟನೆ ಬಗ್ಗೆ ಕೆಲವು ಜಿಲ್ಲಾಧಿಕಾರಿ ವರ್ತನೆ ಬಗ್ಗೆ ಸ್ಪೀಕರ್ ಹಾಗೂ ಮುಖ್ಯಕಾರ್ಯದರ್ಶಿಗಳ ಜೊತೆ ಚರ್ಚಿಸುತ್ತೇವೆ ಎಂದರು.